# ಎಡಿನ್‌ಬರ್ಗ್ ವಿಜ್ಞಾನ ಉತ್ಸವಕ್ಕೆ ಚಾಲನೆ

■ ವಿಕ ಸುದ್ದಿಲೋಕ ಬೆಂಗಳೂರು

ಭಾರತೀಯ ಸಿಟಿ ಸಮೂಹ, ಹೆಗ್ಗಡೆನಗರ ಸಮೀಪದ ಚೊಕ್ಕನಹಳ್ಳಿಯಲ್ಲಿ ಆಯೋಜಿಸಿರುವ 'ಎಡಿನ್‌ಬರ್ಗ್ ಅಂತಾರಾಷ್ಟ್ರೀಯ ವಿಜ್ಞಾನ ಉತ್ಸವ'ವನ್ನು ಸಚಿವ ಕೃಷ್ಣ ಬೈರೇಗೌಡ ಶುಕ್ರವಾರ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ''ಮೂಲ ವಿಜ್ಞಾನ ಮತ್ತು ಸಂಶೋಧನೆಯನ್ನು ನಿರ್ಲಕ್ಷಿಸಲಾಗುತ್ತಿದೆ. ಪೋಷಕರು ತಮ್ಮ ಮಕ್ಕಳನ್ನು ಅಧಿಕ ವೇತನ ಸಿಗುವ ವೈದ್ಯರು ಮತ್ತು ಎಂಜಿನಿಯರ್‌ಗಳನ್ನಾಗಿ ಮಾಡಲು ಅಪೇಕ್ಷಿಸುತ್ತಿದ್ದಾರೆ. ಹಾಗಾಗಿ, ವಿಜ್ಞಾನ ಕ್ಷೇತ್ರವನ್ನು ಕಡೆಗಣಿಸಲಾಗುತ್ತಿದೆ,'' ಎಂದು ಹೇಳಿದರು.

''ಇಂದಿನ ಮಕ್ಕಳು ವಿಜ್ಞಾನದತ್ತ ಆಕರ್ಷಿತರಾಗುತ್ತಿದ್ದಾರೆ. ಆದರೆ, ಅವರಿಗೆ ಪೋಷಕರ ಬೆಂಬಲವಿಲ್ಲವಾಗಿದೆ. ತಂತ್ರಜ್ಞಾನದ ಅಭಿವೃದ್ಧಿಯಲ್ಲಿ ವಿಜ್ಞಾನದ ಪಾತ್ರ ಬಹುಮುಖ್ಯವಾಗಿದ್ದು, ಇದಕ್ಕನುಗುಣವಾಗಿ ವಿದ್ಯಾರ್ಥಿಗಳನ್ನು ತಯಾರು ಮಾಡಬೇಕಾದ ಅಗತ್ಯವಿದೆ. ಈ ನಿಟ್ಟಿನಲ್ಲಿ ವಿಜ್ಞಾನ ಉತ್ಸವವನ್ನು ಹಮ್ಮಿಕೊಂಡಿರುವುದು ಶ್ಲಾಘನೀಯ. ಇದರಿಂದ ವಿದ್ಯಾರ್ಥಿಗಳಿಗೆ ಸಾಕಷ್ಟು ಅನುಕೂಲವಾಗಲಿದೆ,'' ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಭಾರತೀಯ ಸಿಟಿ ಸಮೂಹದ ಅಧ್ಯಕ್ಷ ಸ್ನೇಹದೀಪ್ ಅಗರ್‌ವಾಲ್ ಮಾತನಾಡಿ, ''ಎಡಿನ್‌ಬರ್ಗ್ ಅಂತಾರಾಷ್ಟ್ರೀಯ ವಿಜ್ಞಾನ ಉತ್ಸವವು ಸೆ.8ರವರೆಗೆ ನಡೆಯಲಿದ್ದು, ಸುಮಾರು 50 ಸಾವಿರ ವಿದ್ಯಾರ್ಥಿಗಳು ಮತ್ತು ಪೋಷಕರು ಆಗಮಿಸುವ ನಿರೀಕ್ಷೆ ಇದೆ. ವಿದ್ಯಾರ್ಥಿಗಳು, ಶಿಕ್ಷಕರಿಗೆ ವಿಜ್ಞಾನ ಕ್ಷೇತ್ರದ ತಜ್ಞರೊಂದಿಗೆ ಚರ್ಚಿಸಲು ಇದೊಂದು ಉತ್ತಮ ವೇದಿಕೆಯಾಗಿದೆ,'' ಎಂದು ತಿಳಿಸಿದರು.

ಬ್ರಿಟನ್‌ನ ಭಾರತೀಯ ಉಪ ರಾಯಭಾರಿ ಇಯಾನ್ ಫೆಲ್ಪ್ಸ್, ''ತಂತ್ರಜ್ಞಾನ ಮತ್ತು ಸಂಶೋಧನಾ ಕ್ಷೇತ್ರದಲ್ಲಿ ಬೆಂಗಳೂರು ಸಾಕಷ್ಟು ಪ್ರಗತಿ ಸಾಧಿಸಿದೆ. ಭವಿಷ್ಯದ ದೃಷ್ಟಿಯಿಂದ ಈ ರೀತಿಯ ವಿಜ್ಞಾನ ಉತ್ಸವಗಳಲ್ಲಿ ವಿದ್ಯಾರ್ಥಿಗಳ ಪಾಲ್ಗೊಳ್ಳುವಿಕೆ ಅತ್ಯಂತ ಅಗತ್ಯವೆನಿಸಿದೆ,'' ಎಂದರು.

ವಿಜ್ಞಾನ ಉತ್ಸವದ ನಿರ್ದೇಶಕ ಡಾ. ಸೈಮನ್ ಗಗೆ, ''ಪ್ರಪ್ರಥಮ ಬಾರಿಗೆ ಭಾರತದಲ್ಲಿ ವಿಜ್ಞಾನ ಉತ್ಸವ ಹಮ್ಮಿಕೊಳ್ಳಲಾಗಿದ್ದು, ಯಶಸ್ವಿಯಾಗುವ ನಿರೀಕ್ಷೆ ಇದೆ. ಇಲ್ಲಿ ವಿಜ್ಞಾನ, ತಂತ್ರಜ್ಞಾನ ಮತ್ತು ವೈದ್ಯ ಕ್ಷೇತ್ರದ ಪ್ರಾತ್ಯಕ್ಷಿಕೆಗಳನ್ನು ನೀಡಲಾಗುವುದು. ಅಪಘಾತದಲ್ಲಿ ಗಾಯಗೊಂಡವರಿಗೆ ಚಿಕಿತ್ಸೆ ನೀಡುವ ಕುರಿತು ತಜ್ಞರು ಪ್ರಾತ್ಯಕ್ಷಿಕೆ ಮೂಲಕ ವಿವರಿಸಲಿದ್ದಾರೆ. ಅಲ್ಲದೇ ಯಂತ್ರೋಪಕರಣಗಳ ಕಾರ್ಯನಿರ್ವಹಣೆ, ರಾಸಾಯನಿಕ ಬಳಕೆಯ ಬಗ್ಗೆಯೂ ಮಾಹಿತಿ ನೀಡಲಾಗುತ್ತದೆ. ಇದು ವಿದ್ಯಾರ್ಥಿಗಳು ಮತ್ತು ಶಿಕ್ಷಕರಿಗೆ ತುಂಬಾ ಸಹಕಾರಿಯಾಗಲಿದೆ,'' ಎಂದು ತಿಳಿಸಿದರು. ಐಐಎಂನ ಪ್ರೊ. ರಾಜೀವ್ ಗೌಡ, ಡಿಸ್ಕವರಿ ನೆಟ್‌ವರ್ಕ್ಸ್ ಏಷ್ಯಾ ಪೆಸಿಫಿಕ್‌ನ ಮಾರುಕಟ್ಟೆ ವಿಭಾಗದ ಉಪಾಧ್ಯಕ್ಷ ರಾಜೀವ್ ಭಕ್ಷಿ ಮತ್ತಿತರರು ಉಪಸ್ಥಿತರಿದ್ದರು.

ವಿಕ ಚಿತ್ರಲೋಕ





ನಗರದ ಭಾರತೀಯ ಸಿಟಿಯಲ್ಲಿ ಶುಕ್ರವಾರ ಆರಂಭಗೊಂಡ ಎಡಿನ್‌ಬರ್ಗ್ ವಿಜ್ಞಾನ ಉತ್ಸವದಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಪ್ರಾತ್ಯಕ್ಷಿಕೆಗಳ ಮೂಲಕ ಹಲವು ವಿಷಯಗಳ ಮಾಹಿತಿ ನೀಡಲಾಯಿತು.